ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಶಿಕ್ಷಣ ಸಂಸ್ಥೆಗಳಿಗೆ ನೇಮಕಾತಿ ಬಗ್ಗೆ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

124 (211) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಅನುದಾನಿತ ವಿದ್ಯಾ ಸಂಸ್ಥೆಗಳಲ್ಲಿ ಖಾಲಿ ಇರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; ಹುದ್ದೆ ಮಂಜೂರು ಪ್ರಕ್ರಿಯೆಯು ತಡವಾಗಿರುವುದಕ್ಕೆ ಕಾರಣಗಳೇನು;

(ಆ) ನೇಮಕಾತಿ ಪ್ರಕ್ರಿಯೆಯು ವಿಳಂಬದಿಂದಾಗಿ ಶಿಕ್ಷಕರ ವಯೋಮಿತಿ ಮೀರಿ ಅವಕಾಶ ವಂಚಿತರಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಲ್ಲದೆ ಅಂತಿಮ ವೇತನ ಪಡೆದುಕೊಳ್ಳಲು ತಡವಾಗುವುದಿಲ್ಲವೇ;

(ಇ) ಅನುದಾನಿತ ವಿದ್ಯಾಸಂಸ್ಥೆಗಳಲ್ಲಿ ಸರ್ಕಾರವು ನೇಮಕಾತಿ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭಿಸಲಿದೆ ಮತ್ತು ಪೂರ್ಣಗೊಳಿಸಲಿದೆ? (ವಿವರ ನೀಡುವುದು)